**MARCH 22 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಮುಕ್ತ, ನ್ಯಾಯಸಮ್ಮತ ಚುನಾವಣೆಗೆ ವಿಪಕ್ಷಗಳ ಬ್ಯಾಂಕ್ ಖಾತೆ ಬಳಕೆಗೆ ಅನುವು ಮಾಡಿಕೊಡುವಂತೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಒತ್ತಾಯ.**
- **ಲೋಕಸಭಾ ಚುನಾವಣೆ; ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಅಧಿಕಾರಿಗಳಿಂದ ಸೂಕ್ತ ಕ್ರಮ.**
- **ರಾಜ್ಯದ ವಿವಿಧೆಡೆ ಮತದಾನದ ಕುರಿತು ಜಾಗೃತಿ ಜಾಥಾ.**
- **ರಾಜ್ಯದ ಹೈಕೋರ್ಟ್‌ನ ನ್ಯಾಯಮೂರ್ತಿಯಾಗಿ ಅನು ಶಿವರಾಮನ್ ಪ್ರಮಾಣವಚನ ಸ್ವೀಕಾರ.**

**ಈಗ ವಾರ್ತೆಗಳ ವಿವರ**

**ಕೇಂದ್ರ ಸರ್ಕಾರ, ತೆರಿಗೆ ಇಲಾಖೆ, ಜಾರಿ ನಿರ್ದೇಶನಾಲಯ, ಚುನಾವಣಾ ಆಯೋಗದಂತಹ ಸಾಂವಿಧಾನಿಕ ಸಂಸ್ಥೆಗಳನ್ನು ದುರುಪಯೋಗ ಮಾಡಿಕೊಳ್ಳುತ್ತಿದೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪಿಸಿದ್ದಾರೆ. ದೆಹಲಿಯ ಕೇಂದ್ರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ವಿರೋಧ ಪಕ್ಷಗಳ ಬ್ಯಾಂಕ್ ಖಾತೆಯನ್ನು ಸ್ಥಗಿತಗೊಳಿಸಿದೆ. ದೇಶದಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗಳು ನಡೆಯಬೇಕಾದರೆ ಸಾಂವಿಧಾನಿಕ ಸಂಸ್ಥೆಗಳು ವಿಪಕ್ಷಗಳ ಬ್ಯಾಂಕ್ ಖಾತೆಗಳನ್ನು ಬಳಕೆ ಮಾಡಲು ಅನುವು ಮಾಡಿಕೊಡಬೇಕೆಂದು ಒತ್ತಾಯಿಸಿದರು.**

*******

**ಲೋಕಸಭಾ ಚುನಾವಣೆ ಹಿನ್ನೆಲೆ, ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ರಾಜ್ಯಾದ್ಯಂತ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮಾದರಿ ನೀತಿ ಸಂಹಿತೆ ಜಾರಿಯಾದ ಮರುಕ್ಷಣದಿಂದಲೇ ಜಿಲ್ಲೆಯ ಎಲ್ಲ ನಗರ, ಪಟ್ಟಣ ಮತ್ತು ಮಹಾನಗರ ಹಾಗೂ ಗ್ರಾಮಗಳಲ್ಲಿ ಸರಕಾರಿ, ಸಾರ್ವಜನಿಕ ಮತ್ತು ಖಾಸಗಿ ಸ್ಥಳ, ಕಟ್ಟಡಗಳಲ್ಲಿ ಪ್ರಚುರಪಡಿಸಿದ್ದ, ಮತದಾರರ ಮೇಲೆ ಪ್ರಭಾವ ಬೀರಬಹುದಾದ ವಿವಿಧ ರೀತಿಯ ಪ್ರಚಾರ ಸಾಮಗ್ರಿಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆಯಲ್ಲಿ ತಿಳಿಸಿರುವ ಅವರು, ಮಾದರಿ ನೀತಿ ಸಂಹಿತೆ ತಂಡದ ಸದಸ್ಯರು ಜಿಲ್ಲೆಯ ಪ್ರತಿ ಸ್ಥಳಗಳನ್ನು ಪರಿಶೀಲಿಸುತ್ತಿದ್ದು, ಸ್ಥಳೀಯ ಹಾಗೂ ಗ್ರಾಮಮಟ್ಟದಲ್ಲಿ ಕೂಲಂಕುಶವಾಗಿ ಈ ಕುರಿತು ಪರಿಶೀಲಿಸಿ, ಕ್ರಮ ಕೈಗೊಳ್ಳುತ್ತಿದ್ದಾರೆ. ಲೋಕಸಭೆ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಪ್ರಚಾರ ಸಾಮಗ್ರಗಳನ್ನು ಪ್ರಚುರ ಪಡಿಸುವ ಮೊದಲು ಭಾರತ ಚುನಾವಣಾ ಆಯೋಗದ ನಿಯಮಾನುಸಾರ ಅನುಮತಿ ಪಡೆದುಕೊಳ್ಳಬೇಕು. ತಪ್ಪಿದಲ್ಲಿ ತಕ್ಷಣ ಕ್ರಮ ಜರುಗಿಸಲಾಗುತ್ತದೆ ಎಂದು ಹೇಳಿದ್ದಾರೆ. ಮಾರ್ಚ್ 16 ರಿಂದ 48 ಗಂಟೆಗಳ ಒಳಗಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಾದ್ಯಂತ ವಿವಿಧ ರಾಜಕೀಯ ಪಕ್ಷಗಳ ಒಟ್ಟು 12 ಸಾವಿರದ 971 ಪೋಸ್ಟರ್, ಬ್ಯಾನರ್ ಮತ್ತು ಗೋಡೆ ಬರಹ ಇತ್ಯಾದಿಗಳನ್ನು ತೆರವುಗೊಳಿಸಲಾಗಿದೆ ಎಂದು ಕ್ಷೇತ್ರದ ಚುನಾವಣಾಧಿಕಾರಿಯೂ ಆಗಿರುವ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮಾಹಿತಿ ನೀಡಿದ್ದಾರೆ. ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಕ್ಷೇತ್ರಕ್ಕೆ ಏಪ್ರಿಲ್ 26 ರಂದು ಮತದಾನ ನಡೆಸಲು ದಿನಾಂಕ**

ನಿಗದಿಯಾಗಿದೆ. ಮಾದರಿ ನೀತಿ ಸಂಹಿತೆ ಜಾರಿಯಾದ ಕಾರಣ ಕ್ಷೇತ್ರದ ವ್ಯಾಪ್ತಿಯಲ್ಲಿ ರಾಜಕೀಯ ಪಕ್ಷಗಳು ಮತ್ತು ಮುಖಂಡರಿಗೆ ಸೇರಿದ ಗೋಡೆಬರಹ, ಜಾಹೀರಾತು ಫಲಕ, ಬ್ಯಾನರ್, ಪೋಸ್ಟರ್ ಗಳನ್ನು 48 ಗಂಟೆಗಳಲ್ಲಿ ತೆರವುಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ. ಲೋಕಸಭಾ ಸಾರ್ವತ್ರಿಕ ಚುನಾವಣೆ ಉತ್ತಮ ರೀತಿಯಲ್ಲಿ ನಡೆಯುವ ಉದ್ದೇಶದಿಂದ ಅನೇಕ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹಳಿಯಾಳ ಸಹಾಯಕ ಚುನಾವಣಾಧಿಕಾರಿ ಸ್ಟೆಲ್ಲಾ ವರ್ಗೀಸ್ ತಿಳಿಸಿದ್ದಾರೆ. ಹಳಿಯಾಳದ ತಹಶೀಲ್ದಾರ್ ಕಾರ್ಯಾಲಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಕಾರ್ಯ ಸುಗಮವಾಗಿ ನಿರ್ವಹಿಸಲು ವಿವಿಧ ತಂಡಗಳನ್ನು ರಚಿಸಲಾಗಿದೆ. ಮಾದರಿ ನೀತಿ ಸಂಹಿತೆ ಜೂನ್ 6 ವರೆಗೆ ಜಾರಿಯಲ್ಲಿದ್ದು, ರಾಜಕೀಯಕ್ಕೆ ಸಂಬಂಧಿಸಿದ ಬ್ಯಾನರ್, ಪೋಸ್ಟರಗಳನ್ನು ತೆಗೆಯಲು ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು. ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆ, ಚುನಾವಣಾ ಕರ್ತವ್ಯಗಳಿಗೆ ನಿಯೋಜನೆಗೊಂಡಿರುವ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿ ಡಾಕ್ಟರ್ ಕೆ.ಎನ್.ಅನುರಾಧ ತಿಳಿಸಿದ್ದಾರೆ. ಲೋಕಸಭಾ ಚುನಾವಣೆ ಪಾರದರ್ಶಕವಾಗಿ, ಶಾಂತಿಯುತವಾಗಿ ನಡೆಸಲು ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಕೊಡಗು ಜಿಲ್ಲೆಯಲ್ಲಿರುವ ಎಲ್ಲಾ ಶಸ್ತ್ರಾಸ್ತ್ರ ಪರವಾನಗಿದಾರರು ಹೊಂದಿರುವ ಶಸ್ತ್ರಾಸ್ತ್ರಗಳನ್ನು ಸೂಕ್ತ ರೀತಿಯಲ್ಲಿ ಠೇವಣಿ ಇರಿಸುವಂತೆ ಜಿಲ್ಲಾಧಿಕಾರಿ ವೆಂಕಟರಾಜ ಆದೇಶಿಸಿದ್ದಾರೆ.

*******

ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ 169 – ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ನಗರತ್ ಪೇಟೆಯಲ್ಲಿ ಮಾರ್ಚ 18 ರಂದು ನಡೆದ ಘಟನೆಗೆ ಸಂಬಂಧಿಸಿದಂತೆ ಮಾದರಿ ನೀತಿ ಸಂಹಿತೆ ಅವಧಿಯಲ್ಲಿ ಪೋಲಿಸ್ ಇಲಾಖೆ ನೀಡಿದ ನಿರ್ದೇಶನವನ್ನು ಪಾಲಿಸದ ಹಿನ್ನೆಲೆ, ಹಲಸೂರು ಗೇಟ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಸದ ತೇಜಸ್ವಿ ಸೂರ್ಯ ಸಾಮಾಜಿಕ ಜಾಲತಾಣದಲ್ಲಿ ಕೋಮು ಭಾವನೆಗಳಿಗೆ ಧಕ್ಕೆ ತರುವ ರೀತಿಯಲ್ಲಿ ಸಂದೇಶಗಳನ್ನು ನೀಡಿರುವ ಹಿನ್ನೆಲೆ ಇವರ ಮೇಲೆ ಕ್ರಮವಹಿಸಲು 'ದ್ವೇಷದ ಮಾತುಗಳ ವಿರುದ್ಧ ಅಭಿಯಾನದ' ಸದಸ್ಯರು ಚುನಾವಣಾ ಆಯೋಗಕ್ಕೆ ನೀಡಿದ ದೂರಿನ ಆಧಾರದಲ್ಲಿ ಹುಲಸೂರು ಗೇಟ ಪೋಲಿಸ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಲೋಕಸಭಾ ಚುನಾವಣೆ ಹಿನ್ನೆಲೆ ರಾಜ್ಯದ ವಿವಿಧೆಡೆ, ಮತದಾನದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಮತದಾನ ಜಾಗೃತಿಗಾಗಿ ಗದಗ ತಾಲ್ಲೂಕು ಸ್ವೀಪ್ ಸಮಿತಿ, ಕುರ್ತಕೋಟಿ ಹಾಗೂ ಅಂತೂರ್ ಗ್ರಾಮ ಪಂಚಾಯತಿ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ್ ನಿನ್ನೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಚುನಾವಣೆಯನ್ನು ಎಲ್ಲರೂ ಹಬ್ಬದಂತೆ ಆಚರಿಸಬೇಕು. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕೆಂಬ ಉದ್ದೇಶದಿಂದ ವಿನೂತನವಾಗಿ ಸ್ವೀಪ್ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದರು. ಚಿತ್ರದುರ್ಗ ನಗರದಲ್ಲಿ ಹನ್ನೆರಡು ಮತಗಟ್ಟೆಗಳ ವ್ಯಾಪ್ತಿಯಲ್ಲಿ 'ಮತದಾರರ ನಡಿಗೆ ಮತಗಟ್ಟೆ ಕಡೆಗೆ' ಎಂಬ ಶೀರ್ಷಿಕೆಯಡಿ ವಾಕಥಾನ್ ಮೂಲಕ ಜಾಗೃತಿ ಜಾಥಾವನ್ನು ಜಿಲ್ಲಾ ಪಂಚಾಯತ ಕಾರ್ಯನಿರ್ವಹಣಾ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷ ಸೋಮಶೇಖರ್ ಉದ್ಘಾಟಿಸಿದರು. ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಜಟ್ಟಿಹುಂಡಿ ಗ್ರಾಮದಲ್ಲಿ ಲೋಕಸಭಾ ಚುನಾವಣೆ–2024 ರ ಪ್ರಯುಕ್ತ 'ಚುನಾವಣೆ ಪರ್ವ ದೇಶದ ಗರ್ವ' ಎಂಬ ಶೀರ್ಷಿಕೆಯಡಿ ಕಡ್ಡಾಯವಾಗಿ ಮತದಾನ ಮಾಡುವಂತೆ ಕುಂಭ ಮೇಳದ ಜೊತೆಗೆ ಅರಿವು ಮತ್ತು ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ.ಎಂ. ಗಾಯತ್ರಿ ಚಾಲನೆ ನೀಡಿದರು. ಮಹಿಳೆಯರಿಗೆ, ಗ್ರಾಮಸ್ಥರಿಗೆ ಮನೆ ಮನೆಗೆ ತೆರಳಿ ಮತದಾನವನ್ನು ಕಡ್ಡಾಯವಾಗಿ ಮಾಡುವಂತೆ ಕರ ಪತ್ರಗಳನ್ನು ನೀಡುವ ಮೂಲಕ ಅರಿವು ಮೂಡಿಸಿ ಮತ್ತು ಮಾನವ ಸರಪಳಿ ನಿರ್ಮಿಸಿ ಚುನಾವಣಾ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.ಚಾಮರಾಜನಗರ ಲೋಕಸಭಾ ಚುನಾವಣೆಯಲ್ಲಿ ಮಹಿಳೆಯರಿಗಾಗಿ ಪ್ರತಿ ತಾಲೂಕಿಗೆ ತಲಾ 2 ಸಖೀ ಸೌರಭ ಮತಗಟ್ಟೆ, ಜಾನಪದ ಕಲಾ ಶೈಲಿಯ ಮತಗಟ್ಟೆ, ಅರಣ್ಯದ ಮಹತ್ವ ತಿಳಿಸುವ ಹಸಿರು ಮತಗಟ್ಟೆ ಹಾಗೂ ರೈತರ ಗಮನ ಸೆಳೆಯಲು ಅನ್ನದಾತರ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಚಾಮರಾಜನಗರ ಜಿಲ್ಲಾ ಪಂಚಾಯಿತಿ ಉಪ

ಕಾರ್ಯದರ್ಶಿ ಪಿ.ಲಕ್ಷ್ಮೀ ತಿಳಿಸಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಮತದಾನದ ಶೇಕಡಾವಾರು ಪ್ರಮಾಣ ಹೆಚ್ಚಿಸಲು ಹಾಗೂ ಮತದಾರರಲ್ಲಿ ಮತದಾನದ ಜಾಗೃತಿ ಮೂಡಿಸುವುದರ ಜೊತೆಗೆ ಸ್ವೀಪ್ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಅಧಿಕಾರಿಗಳು ಮುಂದಾಗಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿಯೂ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರಾಹುಲ ಶಿಂಧೆ ತಿಳಿಸಿದ್ದಾರೆ.

*******

ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿಯಾಗಿ ಅನು ಶಿವರಾಮನ್ ರಾಜಭವನದಲ್ಲಿ ನಿನ್ನೆ ಪ್ರಮಾಣವಚನ ಸ್ವೀಕರಿಸಿದರು.ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಪ್ರಮಾಣವಚನ ಬೋಧಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ.ಪಾಟೀಲ್, ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

*******

ಹೆಚ್ಚು ನೀರು ಬಳಕೆ ಮಾಡುವ ಹಾಗೂ ಜನಸಂಖ್ಯೆ ಹೆಚ್ಚಾಗಿ ಸಂಚರಿಸುವ ಹೋಟೇಲ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ನೀರಿನ ಉಳಿತಾಯ ಬಹಳ ಮುಖ್ಯ. ಈ ನಿಟ್ಟಿನಲ್ಲಿ ನಲ್ಲಿಗಳಿಗೆ ಏರಿಯೇಟರ್ ಅಳವಡಿಕೆ ಹಾಗೂ ಇನ್ನಿತರೆ ಉದ್ದೇಶಗಳಿಗಾಗಿ ಸಂಸ್ಕರಿಸಿದ ನೀರನ್ನು ಬಳಸುವಂತೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧ್ಯಕ್ಷ ಡಾಕ್ಟರ್ ರಾಮ್ ಪ್ರಸಾತ್ ಮನೋಹರ್ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಹೊಟೇಲ್ ಮಾಲೀಕರು ಹಾಗೂ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ನ. ನೀರು ಉಚಿತ ಎನ್ನುವ ಭಾವನೆಯಿಂದ ಜನರು ಅಮೂಲ್ಯ ಸಂಪತ್ತನ್ನ ಅನಗತ್ಯವಾಗಿ ಪೋಲು ಮಾಡುತ್ತಿದ್ದಾರೆ. ಇದನ್ನು ತಡೆಗಟ್ಟಲು ಎಲ್ಲರ ಸಹಕಾರ ಅಗತ್ಯವಿದೆ ಎಂದರು. ಕುಡಿಯುವ ಉದ್ದೇಶಕ್ಕೆ ಹೊರತು ಪಡಿಸಿ ಸಂಸ್ಕರಿಸಿದ ನೀರನ್ನು ಬಹಳಷ್ಟು ಇತರ ಉದ್ದೇಶಗಳಿಗಾಗಿ ಬಳಸಿಕೊಳ್ಳಬಹುದಾಗಿದೆ. ಅಗತ್ಯವಿರುವ ಹೋಟೇಲ್‌ಗಳಿಗೆ ರಿಯಾಯಿತಿ ದರದಲ್ಲಿ ಸಂಸ್ಕರಿಸಿದ ನೀರನ್ನು ತಲುಪಿಸುವ ವ್ಯವಸ್ಥೆ ಮಾಡಲಾಗುತ್ತದೆ. ಈ ಬಗ್ಗೆ ಸಂಘದ ಪದಾಧಿಕಾರಿಗಳು ತಮ್ಮ ಸದಸ್ಯರುಗಳಿಗೆ ಮಾಹಿತಿ ನೀಡಬೇಕು ಎಂದರು. ನೀರು ಉಳಿತಾಯ, ಮರುಬಳಕೆ ಹಾಗೂ ಅಂತರ್ಜಲ ಅಭಿವೃದ್ದಿಗೆ ಕೊಡುಗೆ ನೀಡುವಂತಹ ಹೋಟೇಲ್ ಮತ್ತು ರೆಸ್ಟೋರೆಂಟ್‌ಗಳಿಗೆ ಗ್ರೀನ್ ಸ್ಟಾರ್ ರೇಟಿಂಗ್ ನೀಡಲಾಗುವುದು ಎಂದರು. ಈಗಾಗಲೇ ಸೂಚನೆ ನೀಡಿರುವಂತೆ ರೈನ್ ಡ್ಯಾನ್ಸ್, ವಾಣಿಜ್ಯ ಉದ್ದೇಶದ ಹೋಳಿ ಆಚರಣೆಗೆ ಕಾವೇರಿ ನೀರು ಹಾಗೂ ಕೊಳವೆ ಬಾವಿಗಳ ನೀರು ಬಳಸುವುದನ್ನು ನಿಷೇಧಿಸಲಾಗಿದೆ. ಈ ಬಗ್ಗೆ ತಮ್ಮ ಸದಸ್ಯರುಗಳ ಗಮನಕ್ಕೆ ತಂದು ಅನಗತ್ಯ ದುರ್ಬಳಕೆ ಆಗದಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಹೋಳಿ ಹಬ್ಬ ಹಾಗೂ ರಂಜಾನ್ ಹಬ್ಬವನ್ನು ಎಲ್ಲ ಧಾರ್ಮಿಕ ಸಮುದಾಯದವರು ಪರಸ್ಪರ ಸೌಹಾರ್ದತೆ, ಸಹಕಾರದಿಂದ ಹಾಗೂ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಆಚರಿಸುವಂತೆ ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದ್ದಾರೆ.

*******

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಶಿವಮೊಗ್ಗ ಜಿಲ್ಲೆಯಲ್ಲಿ ಏಪ್ರಿಲ್ 1 ರಿಂದ 30 ರವರೆಗೆ ಜಾನುವಾರುಗಳಿಗೆ 5ನೇ ಸುತ್ತಿನ ಕಾಲುಬಾಯಿ ಲಸಿಕಾ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಎಲ್ಲ ಜಾನುವಾರುಗಳಿಗೆ ಲಸಿಕೆ ಹಾಕುವ ಮೂಲಕ ಶೇಕಡ 100 ರಷ್ಟು ಪ್ರಗತಿ ಸಾಧಿಸಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*******

ಸಾರ್ವತ್ರಿಕಾ ಲಸಿಕಾ ಕಾರ್ಯಕ್ರಮದಡಿ ಅರ್ಹ ಮಕ್ಕಳನ್ನು ಜಿಲ್ಲೆಯಲ್ಲಿ ಗುರುತಿಸಿ ಲಸಿಕೆಯಿಂದ ವಂಚಿತರಾಗದಂತೆ ನಿಗಾವಹಿಸಬೇಕು ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾಕ್ಟರ್ ಪ್ರಭುಲಿಂಗ

ಮಾನಕರ್ ಹೇಳಿದ್ದಾರೆ. ಯಾದಗಿರಿಯಲ್ಲಿ ಎರಡು ದಿನಗಳ ಜಿಲ್ಲಾಮಟ್ಟದ ಆರೋಗ್ಯ ಕಾರ್ಯಕರ್ತರ ಕೈಪಿಡಿ ತರಬೇತಿಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

*******